**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ : ಕೇಂದ್ರ ಕಛೇರಿ : ಬೆಂಗಳೂರು**

# ಪತ್ರಿಕಾ ಪ್ರಕಟಣೆ

## ದೀಪಾವಳಿ ಹಬ್ಬದ ಪ್ರಯುಕ್ತ ಕರಾರಸಾ ನಿಗಮದಿಂದ 2000 ಹೆಚ್ಚುವರಿ ವಿಶೇಷ ಸಾರಿಗೆ ವ್ಯವಸ್ಥೆ

ದಿನಾಂಕ 31.10.2024 ರಂದು ನರಕ ಚತುರ್ದಶಿ ಹಾಗೂ ದಿನಾಂಕ:01.11.2024 ರಂದು ಕನ್ನಡ ರಾಜ್ಯೋತ್ಸವ ದಿನಾಂಕ 02.11.2024ರಂದು ಬಲಿಪಾಡ್ಯಮಿ ಹಬ್ಬದ ಪ್ರಯುಕ್ತ ಕರಾರಸಾ ನಿಗಮ ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ದಿನಾಂಕ 30.10.2024 ರಿಂದ 01.11.2024 ರವರೆಗೆ ಬೆಂಗಳೂರಿನಿಂದ ಈ ಕೆಳಕಂಡ ಸ್ಥಳಗಳಿಗೆ 2000 ಹೆಚ್ಚುವರಿ ವಾಹನಗಳ ವಿಶೇಷ ಸಾರಿಗೆ ವ್ಯವಸ್ಥೆ ಮಾಡಿದೆ. ನಂತರ ರಾಜ್ಯದ ಮತ್ತು ಅಂತರರಾಜ್ಯದ ವಿವಿಧ ಸ್ಥಳಗಳಿಂದ ಬೆಂಗಳೂರಿಗೆ ದಿನಾಂಕ: 03.11.2024 ಹಾಗೂ 04.11.2024 ರಂದು ವಿಶೇಷ ವಾಹನಗಳನ್ನು ಕಾರ್ಯಾಚರಣೆ ಮಾಡಲಾಗುವುದು.

- ಕೆಂಪೇಗೌಡ ಬಸ್ ನಿಲ್ದಾಣದಿಂದ ಧರ್ಮಸ್ಥಳ, ಕುಕ್ಕೆಸುಬ್ರಮಣ್ಯ, ಶಿವಮೊಗ್ಗ, ಹಾಸನ, ಮಂಗಳೂರು, ಕುಂದಾಪುರ, ಶೃಂಗೇರಿ, ಹೊರನಾಡು, ದಾವಣಗೆರೆ, ಹುಬ್ಬಳ್ಳಿ, ಧಾರವಾಡ, ಬೆಳಗಾವಿ, ವಿಜಯಪುರ, ಗೋಕರ್ಣ, ಶಿರಸಿ, ಕಾರವಾರ, ರಾಯಚೂರು, ಕಲಬುರಗಿ, ಬಳ್ಳಾರಿ, ಕೊಪ್ಪಳ, ಯಾದಗೀರ್, ಬೀದರ್, ತಿರುಪತಿ, ವಿಜಯವಾಡ, ಹೈದರಾಬಾದ್ ಮುಂತಾದ ಸ್ಥಳಗಳಿಗೆ ವಿಶೇಷ ಕಾರ್ಯಾಚರಣೆ.
- ಮೈಸೂರು ರಸ್ತೆ ಬಸ್ ನಿಲ್ದಾಣದಿಂದ ಮೈಸೂರು, ಹುಣಸೂರು, ಪಿರಿಯಾಪಟ್ಟಣ, ವಿರಾಜಪೇಟೆ, ಕುಶಾಲನಗರ, ಮಡಿಕೇರಿ ಮಾರ್ಗದ ಕಡೆ ಕಾರ್ಯಾಚರಣೆ.
- ತಮಿಳುನಾಡು ಮತ್ತು ಕೇರಳ ಕಡೆಗೆ ಅಂದರೆ ಮಧುರೈ, ಕುಂಬಕೋಣಂ, ಚೆನ್ನೈ, ಕೊಯಮತ್ತೂರ್, ತಿರುಚಿ, ಪಾಲಕ್ಕಾಡ್, ತ್ರಿಶೂರ್, ಎರ್ನಾಕುಲಂ, ಕ್ಯಾಲಿಕಟ್ ಮುಂತಾದ ಸ್ಥಳಗಳಿಗೆ ಹೋಗುವ ಪ್ರತಿಷ್ಠಿತ ಸಾರಿಗೆಗಳನ್ನು ಶಾಂತಿನಗರದಲ್ಲಿನ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಬಸ್ ನಿಲ್ದಾಣದಿಂದ ಕಾರ್ಯಾಚರಣೆ ಮಾಡಲಾಗುವುದು.
- **ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಹೆಚ್ಚುವರಿ ಸಾರಿಗೆಗಳಿಗೆ ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸುವ ಸೌಲಭ್ಯಗಳನ್ನು ಕಲ್ಪಿಸಲಾಗಿದೆ.**
- **ಪ್ರಯಾಣಿಕರು ಬಸ್ ನಿಲ್ದಾಣಗಳಿಗೆ ತೆರಳುವ ಮುನ್ನ ಮುಂಗಡ ಕಾಯ್ದಿರಿಸಲಾಗಿರುವ ಟಿಕೇಟುಗಳ ಮೇಲೆ ನಮೂದಿಸಲಾಗಿರುವ ಬಸ್ ನಿಲ್ದಾಣ/ಪಿಕ್‌ಅಪ್ ಪಾಯಿಂಟ್‌ನ ಹೆಸರನ್ನು ಗಮನಿಸುವಂತೆ ಕೋರಲಾಗಿದೆ.**
- ಇ–ಟಿಕೇಟ್ ಬುಕಿಂಗ್‌ನ್ನು www.ksrtc.karnataka.gov.in ವೆಬ್ ಸೈಟ್ ಮುಖಾಂತರ ಮಾಡಬಹುದಾಗಿದೆ.
- ನಾಲ್ಕು ಅಥವಾ ಹೆಚ್ಚು ಪ್ರಯಾಣಿಕರು ಒಟ್ಟಾಗಿ ಮುಂಗಡ ಕಾಯ್ದಿರಿಸಿದಲ್ಲಿ **ಶೇಕಡ 5** ರಷ್ಟು ರಿಯಾಯಿತಿ ನೀಡಲಾಗುವುದು ಹಾಗೂ ಹೋಗುವ & ಬರುವ ಪ್ರಯಾಣದ ಟಿಕೇಟ್‌ನ್ನು ಒಟ್ಟಿಗೆ ಕಾಯ್ದಿರಿಸಿದಾಗ ಬರುವ ಪ್ರಯಾಣ ದರದಲ್ಲಿ **ಶೇಕಡ 10** ರಷ್ಟು ರಿಯಾಯಿತಿ ನೀಡಲಾಗುವುದು.
- ನೆರೆ ರಾಜ್ಯಗಳಾದ ತಮಿಳುನಾಡು, ಆಂಧ್ರಪ್ರದೇಶ, ತೆಲಂಗಾಣ, ಕೇರಳ, ಗೋವಾ, ಮಹಾರಾಷ್ಟ್ರ ಹಾಗೂ ಪುದುಚೇರಿಯಲ್ಲಿ ಇರುವ ಪ್ರಮುಖ ನಗರಗಳಲ್ಲಿ ನಿಗಮದ ಮುಂಗಡ ಆಸನಗಳನ್ನು ಕಾಯ್ದಿರಿಸುವ ಕೌಂಟರ್‌ಗಳು ಇದ್ದು, ಇವುಗಳ ಮೂಲಕ ಸಹ ಮುಂಗಡವಾಗಿ ಆಸನಗಳನ್ನು ನಿಗಮದ ಸಾರಿಗೆಗಳಿಗೆ ಕಾಯ್ದಿರಿಸಬಹುದಾಗಿದೆ.
- ಕಾರ್ಯಾಚರಣೆ ಮಾಡಲಾಗುವ ಹೆಚ್ಚುವರಿ ಸಾರಿಗೆಗಳು, ಅವುಗಳು ಹೊರಡುವ ಸ್ಥಳ ಹಾಗೂ ವೇಳಾ ವಿವರಗಳನ್ನು ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸುವ ಅಂತರ್‌ಜಾಲ ವ್ಯವಸ್ಥೆಯಲ್ಲಿ ಹಾಗೂ ಕರಾರಸಾ ನಿಗಮದ ವೆಬ್‌ಸೈಟ್‌ನಲ್ಲಿ ಸಾರ್ವಜನಿಕ ಮಾಹಿತಿಗಾಗಿ ಒದಗಿಸಲಾಗಿದೆ ಹಾಗೂ ಸದರಿ ಹೆಚ್ಚುವರಿ ಸಾರಿಗೆಗಳಲ್ಲಿ ಸಂಚರಿಸುವ ಪ್ರಯಾಣಿಕರು ಕಾಯ್ದಿರಿಸುವ ಮುಂಗಡ ಚೀಟಿಗಳಲ್ಲೂ ಕೂಡ ವಾಹನ ಹೊರಡುವ ಸ್ಥಳದ ವಿವರ ನಮೂದಿಸಲಾಗಿದೆ.
- ಅಲ್ಲದೇ, ನಿಗಮದ ಕಾರ್ಯಾಚರಣೆ ವ್ಯಾಪ್ತಿಯಲ್ಲಿನ ಎಲ್ಲಾ ತಾಲ್ಲೂಕು/ಜಿಲ್ಲಾ ಬಸ್ ನಿಲ್ದಾಣಗಳಿಂದ ಸಂಚಾರ ಒತ್ತಡಕ್ಕನುಗುಣವಾಗಿ ವಿಶೇಷ ಸಾರಿಗೆಗಳ ಕಾರ್ಯಾಚರಣೆ ಮಾಡಲಾಗುವುದು.

ಸಹಿ/–

**ಮುಖ್ಯ ಸಂಚಾರ ವ್ಯವಸ್ಥಾಪಕರು (ಕಾ)**